## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

### ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ.24 ರ ಹೆಚ್.ಬಿ.ಆರ್ ಲೇಔಟ್‌ಗೆ ಸಂಬಂಧಿಸಿದಂತೆ ವಾರ್ಡ್ ಸಮಿತಿ ಸಭೆಯನ್ನು ದಿನಾಂಕ: 07-02-2022 ರಂದು ಆಯೋಜಿಸಿದ್ದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಸಭೆಯಲ್ಲಿ ಹಾಜರಿದ್ದವರ ವಿವರ:-

| ಕ್ರಮ ಸಂಖ್ಯೆ | ಅಧಿಕಾರಿಗಳ ಹೆಸರು | ಪದನಾಮ |
|---|---|---|
| 1 | ಶ್ರೀ.ಕೆ.ಎಲ್.ಗಂಗಾಧರಯ್ಯ | ಸಹಾಯಕ ನಿರ್ದೇಶಕರು (ನಗರ ಯೋಜನೆ-ಪೂರ್ವ) ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ |
| 2 | ಶ್ರೀಮತಿ.ಸಾವಿತ್ರಿ. | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 24 ಹೆಚ್.ಬಿ.ಆರ್ ಬಡಾವಣೆ |
| 3 | ಶ್ರೀ.ರಮೇಶ್.ಆರ್ | ಕಂದಾಯ ನಿರೀಕ್ಷಕರು |
| 4 | ಕುಮಾರಿ ಮೀನಾ.ಬಿ | ಕಿರಿಯ ಆರೋಗ್ಯ ಪರಿವೀಕ್ಷಕರು |
| 5 | ಶ್ರೀ.ರಾಜೇಶ್.ಎಸ್ | ಮಾರ್ಷಲ್ |
| 6 | ಶ್ರೀ. ಪ್ರಸನ್ನ.ಎ.ಆರ್, | ಪ್ರಧಾನ ಕಾರ್ಯದರ್ಶಿ ಹೆಚ್.ಬಿ.ಆರ್ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘ |
| 7 | ಶ್ರೀ.ಹೆಚ್.ಕೆ.ಪ್ರತಾಪ್ | ಸ್ಥಳೀಯರು |
| 8 | ಶ್ರೀ.ವಿ.ನಾರಾಯಣಸ್ವಾಮಿ | ಸ್ಥಳೀಯರು |
| 9 | ಶ್ರೀ.ಎಸ್.ಜೆ.ತೋಳ್ಪಾಡಿ | ಸ್ಥಳೀಯರು |
| 10 | ಶ್ರೀ.ವಿಕ್ರಂ ಮೈಲಾರ ವಿಜಯ | ಸ್ಥಳೀಯರು |

ವಾರ್ಡ್ ಸಮಿತಿಯ ಸದಸ್ಯ ಕಾರ್ಯದರ್ಶಿ ಮತ್ತು ನೋಡಲ್ ಅಧಿಕಾರಿ ರವರು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸ್ವಾಗತಿಸುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1. **ಬಿ.ಡಬ್ಲ್ಯೂ.ಎಸ್.ಎಸ್.ಬಿ:-** ವಾರ್ಡ್ ವ್ಯಾಪ್ತಿಯಲ್ಲಿನ ಮ್ಯಾನ್‌ಹೋಲ್‌ಗಳಲ್ಲಿನ ಹೂಳನ್ನು ತೆರವುಗೊಳಿಸಲು ಶ್ರೀ.ಹೆಚ್.ಕೆ.ಪ್ರತಾಪ್ ರವರು ತಿಳಿಸಿರುತ್ತಾರೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳುವಂತೆ ತಿಳಿಸಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.
   **(ಕ್ರಮ:- ಸ.ಕಾ.ಅ ಬಿ.ಡಬ್ಲ್ಯೂ.ಎಸ್.ಎಸ್.ಬಿ ಉಪ-ವಿಭಾಗ ಕಲ್ಯಾಣನಗರ ಬೆಂಗಳೂರು)**

2. **ಬೃಹತ್ ಮಳೆನೀರು ಗಾಲುವೆ ವಿಭಾಗ (ಬಿ.ಬಿ.ಎಂ.ಪಿ)** ವಾರ್ಡ್ ವ್ಯಾಪ್ತಿಯಲ್ಲಿ ಜೆ.ಎಸ್.ಎಸ್ ಶಾಲೆ ಹತ್ತಿರ ಹೊಸದಾಗಿ ನಿರ್ಮಿಸಿರುವ ದೊಡ್ಡ ಮೋರಿಯ ಕೆಲಸವನ್ನು ಮುಗಿಸಿ ಸಾರ್ವಜನಿಕರಿಗೆ ಓಡಾಡಲು ಅನುಕೂಲ ಮಾಡಿಕೊಡಲು ಶ್ರೀ.ಪ್ರಸನ್ನ, ಆರ್.ಡಬ್ಲ್ಯೂ.ಎ ರವರು ಸಭೆಯಲ್ಲಿ ತಿಳಿಸಿದರು. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ತಿಳಿಸಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.
   **(ಕ್ರಮ:- ಸ.ಕಾ.ಅ ಬೃಹತ್ ಮಳೆನೀರು ಗಾಲುವೆ ವಿಭಾಗ (ಬಿ.ಬಿ.ಎಂ.ಪಿ)**

3. **ಬೆಸ್ಕಾಂ ವಿಭಾಗ:-** ವಾರ್ಡ್ ವ್ಯಾಪ್ತಿಯ ಪಾದಚಾರಿಯ ಮೂಲೆಗಳಲ್ಲಿ (Corner Side) ಅಳವಡಿಸಿರುವ ಟ್ರಾನ್ಸ್‌ಫಾರ್ಮರ್‌ಗಳಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿದ್ದು, ಸದರಿ ಟ್ರಾನ್ಸ್‌ಫಾರ್ಮರ್‌ಗಳನ್ನು ಸ್ಥಳಾಂತರಿಸಲು ಶ್ರೀ.ಪ್ರಸನ್ನ, ಆರ್.ಡಬ್ಲ್ಯೂ.ಎ ರವರು ಸಭೆಯಲ್ಲಿ ತಿಳಿಸಿದರು ಹಾಗೂ 5ನೇ ಬ್ಲಾಕ್‌ನ 14ನೇ ಮುಖ್ಯರಸ್ತೆಯಿಂದ 18ನೇ ಮುಖ್ಯರಸ್ತೆಯವರೆಗಿನ ಎಲ್ಲಾ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ವಿದ್ಯುತ್ ಏರುಪೇರು ಆಗುವುದನ್ನು ಬೆಸ್ಕಾಂ ಇ-9, ವಿಭಾಗರವರು ಸರಿಪಡಿಸಲು ಸಾರ್ವಜನಿಕರು ಸಭೆಯಲ್ಲಿ ತಿಳಿಸಿರುತ್ತಾರೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ತಿಳಿಸಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.
**(ಕ್ರಮ:- ಸ.ಕಾ.ಅ ಬೆಸ್ಕಾಂ ಉಪ-ವಿಭಾಗ)**

4. **ಕಾಮಗಾರಿ ಇಲಾಖೆ:-** ವಾರ್ಡ್ ವ್ಯಾಪ್ತಿಯಲ್ಲಿ, 80 ಅಡಿ ರಸ್ತೆಯಲ್ಲಿ, ಕೃಷ್ಣ ಸಾಗರ್ ಹೋಟೆಲ್ ಪಕ್ಕದಲ್ಲಿ ಫುಟ್‌ಪಾತ್ ಪಾದಚಾರಿ ಮಾರ್ಗದಲ್ಲಿಯೇ ಸಂಪ್ ನಿರ್ಮಿಸಿರುವ ಬಗ್ಗೆ ಹಾಗೂ ಗಣಪತಿ ಟೆಂಪಲ್ ಮುಖ್ಯರಸ್ತೆಯಲ್ಲಿ ಹಣ್ಣಿನ ವ್ಯಾಪಾರಿಗಳು ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡಿರುವ ಬಗ್ಗೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಿರುವ ಸಿ.ಸಿ.ಟಿ.ವಿ ಕ್ಯಾಮರಗಳನ್ನು ದುರಸ್ಥಿಪಡಿಸಲು ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು ಮತ್ತು ಗೋವಿಂದಪುರ ಮುಖ್ಯರಸ್ತೆಯಲ್ಲಿರುವ ದೊಡ್ಡ ಮೋರಿಗೆ ರಸ್ತೆ ಮತ್ತು ಚರಂಡಿಯಲ್ಲಿನ ಮಳೆ ನೀರನ್ನು ಸರಾಗವಾಗಿ ಹರಿಯುವಂತೆ ಮಾಡಲು ಶ್ರೀ.ಪ್ರಸನ್ನ, ಆರ್.ಡಬ್ಲ್ಯೂ.ಎ ರವರು ಸಭೆಯಲ್ಲಿ ತಿಳಿಸಿದರು. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.
**(ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್.ಲೇಔಟ್ ಉಪ-ವಿಭಾಗ)**

5. **ರಸ್ತೆ ಮೂಲಭೂತ ಸೌಕರ್ಯ:** ವಾರ್ಡ್ ವ್ಯಾಪ್ತಿಯ 1ನೇ ಅಡ್ಡರಸ್ತೆ, 5ನೇ ಬ್ಲಾಕ್‌ನಲ್ಲಿ ಕೆ.ಪಿ.ಟಿ.ಸಿ.ಎಲ್ ವಿಭಾಗದವರಿಂದ ರಸ್ತೆ ಕತ್ತರಿಸಿರುವುದನ್ನು ಪುನಶ್ಚೇತನಗೊಳಿಸಲು (Restoration) ಸಾರ್ವಜನಿಕರು ಸಭೆಯಲ್ಲಿ ತಿಳಿಸಿರುತ್ತಾರೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ತಿಳಿಸಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.
**(ಕ್ರಮ:- ರಸ್ತೆ ಮೂಲಭೂತ ಸೌಕರ್ಯ ಬಿ.ಬಿ.ಎಂ.ಪಿ ಪೂರ್ವ)**

6. **ಬೀದಿ ದೀಪಗಳ ನಿರ್ವಹಣೆ:-** ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ಪ್ರದೇಶಗಳಲ್ಲಿ ಬೀದಿ ದೀಪಗಳು ದುರಸ್ಥಿಯಲ್ಲಿದ್ದು, ಹೊಸ ಬೀದಿ ದೀಪಗಳನ್ನು ಅಳವಡಿಸಲು ಹಾಗೂ ಇಂದಿರಾ ಕ್ಯಾಂಟೀನ್ ಹತ್ತಿರ ಹೈ ಮಾಸ್ಕ್ ಅಳವಡಿಸಲು ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು. ಸಭೆಯಲ್ಲಿ ಹಾಜರಿದ್ದ ಬೀದಿ ದೀಪಗಳ ನಿರ್ವಹಣೆ ಸೂಪರ್‌ವೈಸರ್ ರವರು ಬೀದಿ ದೀಪಗಳ ನಿರ್ವಹಣೆಗೆ ಅವಶ್ಯಕವಾಗಿರುವ ಫಿಟಿಂಗ್ಸ್‌ಗಳನ್ನು, ಹೊಸ ಎಲ್.ಇ.ಡಿ ದೀಪಗಳನ್ನು ಒದಗಿಸಲು ಕೋರಿರುತ್ತಾರೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ತಿಳಿಸಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.
**(ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು ವಿದ್ಯುತ್ ವಿಭಾಗ ಪೂರ್ವ ಬೆಂಗಳೂರು)**

7. **ಪೋಲೀಸ್ ಇಲಾಖೆ:-** ವಾರ್ಡ್ ಸಂಖ್ಯೆ.24 ಹೆಚ್.ಬಿ.ಆರ್ ಬಡಾವಣೆ ವ್ಯಾಪ್ತಿಯಲ್ಲಿನ ಅನುಪಯುಕ್ತ ವಾಹನಗಳನ್ನು ಗುರುತಿಸಿ ಅವುಗಳನ್ನು ತೆರವುಗೊಳಿಸಲು ಸಾರ್ವಜನಿಕರು ತಿಳಿಸಿರುತ್ತಾರೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ತಿಳಿಸಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.
**(ಕ್ರಮ:- ಆರಕ್ಷಕ ವೃತ್ತ ನಿರೀಕ್ಷಕರು ಕೆ.ಜಿ.ಹಳ್ಳಿ ಪೋಲೀಸ್ ಠಾಣೆ, ಬೆಂಗಳೂರು)**

8. **ಬಿ.ಡಿ.ಎ ಇಲಾಖೆ:-** ವಾರ್ಡ್ ಸಂಖ್ಯೆ.24 ಹೆಚ್.ಬಿ.ಆರ್ ಬಡಾವಣೆ ವ್ಯಾಪ್ತಿಯಲ್ಲಿನ ಬಿ.ಡಿ.ಎ ಬಡಾವಣೆಯ ಮೂಲೆ ಸೈಟ್‌ಗಳಲ್ಲಿ ಅನಧಿಕೃತವಾಗಿ ಕಟ್ಟಡ ನಿರ್ಮಿಸುತ್ತಿರುವವ ರ ವಿರುದ್ಧ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರು ತಿಳಿಸಿರುತ್ತಾರೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳುವಂತೆ ತಿಳಿಸಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ತಿಳಿಸಿರುತ್ತಾರೆ.
**(ಕ್ರಮ:- ಸ.ಕಾ.ನಿ.ಅ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು)**

9. **ಘನತ್ಯಾಜ್ಯ ನಿರ್ವಹಣೆ:-** ವಾರ್ಡ್ ವ್ಯಾಪ್ತಿಯ ಜಿ.ಎಲ್.ಆರ್ ರಸ್ತೆಯಲ್ಲಿರುವ Block spot ಅನ್ನು ತೆರವುಗೊಳಿಸಲು ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು. ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.
**(ಕ್ರಮ:- ಸ.ಕಾ.ಅ ಘನತ್ಯಾಜ್ಯ ನಿರ್ವಹಣೆ ಸರ್ವಜ್ಞನಗರ ಉಪ-ವಿಭಾಗ ಬೆಂಗಳೂರು)**

ಮುಂದುವರೆದು ದಿನಾಂಕ: 07-02-2022 ರಂದು ವಾರ್ಡ್ ಸಮಿತಿ ಸಭೆಗೆ ಗೈರು ಹಾಜರಾಗಿರುವ ಅಧಿಕಾರಿಗಳನ್ನು ಮುಂದಿನ ವಾರ್ಡ್ ಸಮಿತಿ ಸಭೆಗೆ ತಪ್ಪದೇ ಹಾಜರಾಗಲು ತಿಳಿಸಲಾಗಿದೆ. ತಪ್ಪಿದ್ದಲ್ಲಿ ಮೇಲಾಧಿಕಾರಿಗಳಿಗೆ ವರದಿ ಮಾಡಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

ಈ ಸಭೆಯಲ್ಲಿ ಹಾಜರಿದ್ದ ಎಲ್ಲರನ್ನು ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಂದನೆಗಳೊಂದಿಗೆ,

ಶ್ರೀಮತಿ.ಸಾವಿತ್ರಿ.
ಸದಸ್ಯ ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ 24ಹೆಚ್.ಬಿ.ಆರ್ ಬಡಾವಣೆ

ಶ್ರೀ.ಕೆ.ಎಲ್.ಗಂಗಾಧರಯ್ಯ
ಸಹಾಯಕ ನಿರ್ದೇಶಕರು
(ನಗರ ಯೋಜನೆ-ಪೂರ್ವ) ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ

**ಪ್ರತಿಯನ್ನು:**

1. ಮಾನ್ಯ ಶಾಸಕರು, ಸರ್ವಜ್ಞನಗರ ವಿಧಾನ ಸಭಾಕ್ಷೇತ್ರ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಕೌನ್ಸಿಲ್ ಕಾರ್ಯದರ್ಶಿಗಳು ಬಿ.ಬಿ.ಎಂ.ಪಿ ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಪೂರ್ವ) ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗೆ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ ವಿಭಾಗ) 16ನೇ ಮಹಡಿ, ಪಿ.ಯು.ಬಿ. ಬಿಲ್ಡಿಂಗ್ ಮೆಯೋಹಾಲ್ ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು ರಸ್ತೆ ಮೂಲಭೂತ ಸೌಕರ್ಯ ವಿಭಾಗ ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು ನಂ.01, ಉತ್ತರ ವಿಭಾಗ, ಆರ್.ಟಿ.ನಗರ ಬಿ.ಡಿ.ಎ ಕಾಂಪ್ಲೆಕ್ಸ್ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು ಬೃಹತ್ ಮಳೆ ನೀರುಗಾಲುವೆ ವಿಭಾಗ ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ ವಿಭಾಗ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಕಲ್ಯಾಣನಗರ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
12. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಉಪ ವಿಭಾಗ ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
13. ಆರಕ್ಷಕ ವೃತ್ತ ನಿರೀಕ್ಷಕರು (ಕಾನೂನು ಮತ್ತು ಸುವ್ಯವಸ್ಥೆ) ಕೆ.ಜಿ.ಹಳ್ಳಿ ಪೋಲೀಸ್ ಠಾಣೆ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
14. ಕಛೇರಿ ಕಡತಕ್ಕೆ.